**ಅಸಲು ದಾವ ಸಂಖ್ಯೆಃ 979/2020**

**ಪಿಡಬ್ಲ್ಯೂ -1**

**ಗೌರವಾನ್ವಿತ ಪ್ರಧಾನ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ**

**ಬೆಳಗಾವಿ.**

**ದಿಃ 04-08-2021 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ ವಕೀಲರಾದ ಶ್ರೀ ಪಿ.ಕೆ.ಬಿ ರವರಿಂದಃ-**

**ಸಾಕ್ಷಿಗೆ ಕನ್ನಡ ಭಾಷೆ ಬಾರದ ಕಾರಣ ಹಿಂದಿ (ಮರಾಠಿ) ಭಾಷೆ ಬರುತ್ತಿದ್ದು ವಾದಿ ಪರ ವಕೀಲರಿಗೆ ಕನ್ನಡ ಮತ್ತು ಹಿಂದಿ (ಮರಾಠಿ) ಭಾಷೆ ಬರುತ್ತಿದ್ದು ವಕೀಲರು ಸ್ವತಹ ಕನ್ನಡ ಭಾಷೆಗೆ ತರ್ಜುಮೆ ಮಾಡಿ ಹೇಳಿರುತ್ತಾರೆ.**

ನಾನು ಈ ದಾವೆಯಲ್ಲಿ 2ನೇ ವಾದಿ ಇರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದು ಇರುತ್ತದೆ.

ದಾವಾ ಆಸ್ತಿಗೆ ಸಂಬಂಧಿಸಿದ ಪಹಣಿ ಪತ್ರಿಕೆಗಳ ದೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ಮತ್ತು 2 ಎಂದು, ದಿನಾಂಕ 13.08.2020 ರ ಲೀಗಲ್ ನೋಟಿಸಿನ ಕಛೇರಿ ಪ್ರತಿಯನ್ನು ನಿಪಿ-3 ಎಂದು, 5 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-4 ರಿಂದ 8 ಎಂದು, ಒಂದು ಪಹಣಿ ಪತ್ರಿಕೆಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, ಸದರಿ ದಾಖಲೆಯಲ್ಲಿರುವ ಬರವಣಿಗೆ ಮರಾಠಿ ಭಾಷೆಯಲ್ಲಿದ್ದು ಅದನ್ನು ಕನ್ನಡಕ್ಕೆ ಅನುವಾದ ಮಾಡಿರುವ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ದಿನಾಂಕ 08.06.1988 ರ ನೊಂದಾಯಿತವಲ್ಲ ಕ್ರಯ ಕರಾರು ಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯು ನೊಂದಾಯಿತವಲ್ಲದ ದಾಖಲೆಯಾಗಿರುವುದರಿಂದ ಅದನ್ನು ನಿಶಾನೆಯಾಗಿ ಗುರುತಿಸುವ ಬಗ್ಗೆ ವಾದವನ್ನು ಮಂಡಿಸಲು ದಿನಾಂಕವನ್ನು ನೀಡಲಾಯಿತು.

**ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶವನ್ನು ಕೋರಿದ್ದು ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ತೆ.ನ್ಯಾ.ದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ ಸರಿಯಿದೆ.**

**ಸಹಿ/-**

**ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು,**

**ಬೆಳಗಾವಿ.**